**ಕರ್ನಾಟಕ ಸರ್ಕಾರ ನಡವಳಿಗಳು**

**ವಿಷಯ:** ರಾಜ್ಯ ಸರ್ಕಾರದ ಆಯವ್ಯಯ ಘೋಷಣೆ – ಕಂಡಿಕೆ 112ರಂತೆ ರಾಜ್ಯದ ಸರ್ಕಾರಿ ಹಾಗೂ ಅನುದಾನಿತ ಶಾಲಾ- ಕಾಲೇಜು ವಿದ್ಯಾರ್ಥಿಗಳ ಹಾಜರಾತಿಯನ್ನು AI-Based Student Facial Attendance Monitoring System ಮೊಬೈಲ್ ಅಪ್ಲಿಕೇಷನ್ ಮೂಲಕ ದಾಖಲಿಸುವ "ನಿರಂತರ" ಕಾರ್ಯಕ್ರಮವನ್ನು Centre for E-Governance ಮೂಲಕ ಅನುಷ್ಠಾನಗೊಳಿಸಲು ಅನುದಾನ ಬಿಡುಗಡೆಗೆ ಅನುಮತಿ ನೀಡುವ ಕುರಿತು.

**ಓದಲಾಗಿದೆ:**
1. ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ (Budget Advice) ಸಂಖ್ಯೆ: ಆಇ 341 ವೆಚ್ಚ-8/2025, ದಿನಾಂಕ: 11.04.2025.
2. ಇ-ಆಡಳಿತ ಕೇಂದ್ರದ ಇ-ಆಫೀಸ್ ಕಡತ ಸಂಖ್ಯೆ (File No:- CEG-AIML0ADMN/39/2025-MAKA)
3. ಸರ್ಕಾರದ ಆದೇಶ ಸಂಖ್ಯೆ: ಇಪಿ 101 ಯೋಯೋಕ 2025 – ಭಾಗ-7, ದಿನಾಂಕ: 30.01.2026.
4. ಸರ್ಕಾರದ ಆದೇಶ ಸಂಖ್ಯೆ: ಇಪಿ 51 ಇಜಿಓವಿ 2025, ದಿನಾಂಕ: 16.02.2026.

*****

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮಾಂಕ (1) ರಲ್ಲಿ, 'ನಿರಂತರ' ಕಾರ್ಯಕ್ರಮದಡಿ Face Recognition ತಂತ್ರಜ್ಞಾನದ ಮೂಲಕ ಮಕ್ಕಳ ಹಾಜರಾತಿಯನ್ನು ಖಚಿತಪಡಿಸುವ ವ್ಯವಸ್ಥೆಯನ್ನು ಜಾರಿಗೊಳಿಸಲು ಲೆಕ್ಕ ಶೀರ್ಷಿಕೆ 4202-01-201-1-04- ಪ್ರಾಥಮಿಕ ಶಾಲೆಗಳು ಮತ್ತು ಪ್ರೌಢಶಾಲೆಗಳಿಗೆ ಮೂಲಭೂತ ಸೌಕರ್ಯ (177-ಐಟಿ ವೆಚ್ಚ - 500.00 ಲಕ್ಷಗಳು) ಒಟ್ಟು – 500.00 ಲಕ್ಷಗಳನ್ನು ನಿಗದಿಪಡಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮಾಂಕ (2)ರ ಇ-ಆಫೀಸ್ ಕಡತದಲ್ಲಿ, ಇ-ಆಡಳಿತ ಕೇಂದ್ರ (CeG) ರವರು ಶಾಲಾ ಶಿಕ್ಷಣ ಇಲಾಖೆಯ ಎ.ಐ. ಆಧಾರಿತ ವಿದ್ಯಾರ್ಥಿಗಳ ಮುಖ ಚಹರೆ ಹಾಜರಾತಿ ಮೇಲ್ವಿಚಾರಣಾ ಅಪ್ಲಿಕೇಶನ್‌ನ 6 ತಿಂಗಳ ಅಭಿವೃದ್ಧಿ ಹಾಗೂ 6 ತಿಂಗಳ ನಿರ್ವಹಣೆ ಮತ್ತು ಮೂಲಸೌಕರ್ಯ ವೆಚ್ಚ ಸೇರಿ ಒಂದು ವರ್ಷಕ್ಕೆ ರೂ.1,99,51,084/- ಗಳ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. ಮುಂದುವರೆದು, ಇ-ಆಡಳಿತ ಕೇಂದ್ರ (CeG) ರವರು ಶಾಲಾ ಶಿಕ್ಷಣ ಇಲಾಖೆ ಮತ್ತು ಪದವಿ ಪೂರ್ವ ಶಿಕ್ಷಣ ಇಲಾಖೆ ಎರಡನ್ನೂ ಒಳಗೊಂಡಂತೆ 15 ತಿಂಗಳಿಗೆ ರೂ. 2,16,87,232/- (ಜಿ.ಎಸ್.ಟಿ. ಒಳಗೊಂಡಂತೆ) ಗಳ ಪರಿಷ್ಕೃತ ಪ್ರಸ್ತಾವನೆಯನ್ನು ಈ ಕೆಳಗಿನಂತೆ ಸಲ್ಲಿಸಲಾಗಿರುತ್ತದೆ.

| Sl no | Particulars | Duration | Cost (in Rs.) (Incl. of GST) |
|---|---|---|---|
| 1 | Capex Phase - HR and GPU Cost | 3 months | 62,75,171 |
| 2 | O&M Phase - HR and GPU Cost | 12 months | 1,54,12,061 |
| Total cost (Development and 12 months O&M) | | | **2,16,87,232** |



prabhavaa.com

ಮೇಲೆ ಓದಲಾದ ಕ್ರಮಾಂಕ (3)ರ ಸರ್ಕಾರದ ಆದೇಶದಲ್ಲಿ, 2025-26ನೇ ಸಾಲಿನ ಆಯವ್ಯಯ ಘೋಷಿತ ಕಾರ್ಯಕ್ರಮಗಳ ಅನುಷ್ಠಾನಕ್ಕೆ ಅಕ್ಟೋಬರ್ – 2025 ರಿಂದ ಮಾರ್ಚ್ – 2026ರವರೆಗಿನ ಆರು ತಿಂಗಳ ಅನುದಾನವನ್ನು ಬಿಡುಗಡೆಗೊಳಿಸಿ ಆದೇಶಿಸಲಾಗಿರುತ್ತದೆ.

ಸದರಿ ಆದೇಶದಲ್ಲಿ, ಕ್ರಮ ಸಂಖ್ಯೆ: 15ರಲ್ಲಿ ಲೆಕ್ಕ ಶೀರ್ಷಿಕೆ – 4202-01-201-1-04 – ಪ್ರಾಥಮಿಕ ಶಾಲೆಗಳು ಮತ್ತು ಪ್ರೌಢಶಾಲೆಗಳಿಗೆ ಮೂಲಭೂತ ಸೌಕರ್ಯ, ಉಪ ಶೀರ್ಷಿಕೆ – 177 – ಐಟಿ ವೆಚ್ಚ ಕಾರ್ಯಕ್ರಮದಡಿ ರೂ. 500.00 ಲಕ್ಷಗಳನ್ನು ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಬಿಡುಗಡೆಗೊಳಿಸಿ, ನಿಯಮಾನುಸಾರ ವೆಚ್ಚ ಭರಿಸಲು ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮಾಂಕ (4)ರ ಸರ್ಕಾರದ ಆದೇಶದಲ್ಲಿ, 2025-26ನೇ ಸಾಲಿನಲ್ಲಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಗೆ ಸಂಬಂಧಿಸಿದ ರಾಜ್ಯ ಸರ್ಕಾರದ ಆಯವ್ಯಯ ಘೋಷಣೆ – ಕಂಡಿಕೆ 112ರಂತೆ ರಾಜ್ಯದ ಸರ್ಕಾರಿ ಹಾಗೂ ಅನುದಾನಿತ ಶಾಲಾ- ಕಾಲೇಜು ವಿದ್ಯಾರ್ಥಿಗಳ ಹಾಜರಾತಿಯನ್ನು AI-Based Student Facial Attendance Monitoring System ಮೊಬೈಲ್ ಅಪ್ಲಿಕೇಷನ್ ಮೂಲಕ ದಾಖಲಿಸುವ "ನಿರಂತರ" ಕಾರ್ಯಕ್ರಮವನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ (ಇ-ಆಡಳಿತ) ಇಲಾಖೆಯ ಇ-ಆಡಳಿತ ಕೇಂದ್ರದ ಮೂಲಕ ಈ ಕೆಳಕಂಡ ಕೋಷ್ಟಕದ ವಿವರಗಳನ್ವಯ ಅಂದಾಜಿಸಿರುವ ಮೊತ್ತವಾದ ರೂ. 2,16,87,232 - (ತೆರಿಗೆ ಸೇರಿ) (ಎರಡು ಕೋಟಿ ಹದಿನಾರು ಲಕ್ಷದ ಎಂಬ್ಬತ್ತೇಳು ಸಾವಿರದ ಇನ್ನೂರ ಮೂವತ್ತೆರಡು ರೂಪಾಯಿಗಳು ಮಾತ್ರ)ಗಳಲ್ಲಿ ಅಭಿವೃದ್ಧಿಪಡಿಸಿ, ಅನುಷ್ಠಾನಗೊಳಿಸಲು ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಹಾಗೂ ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಇವರಿಗೆ ಅನುಮತಿಸಿ ಆದೇಶಿಸಲಾಗಿರುತ್ತದೆ.

| Sl no | Particulars | Duration | Cost (in Rs.) (Incl. of GST) |
|---|---|---|---|
| 1 | Capex Phase - HR and GPU Cost | 3 months | 62,75,171 |
| 2 | O&M Phase - HR and GPU Cost | 12 months | 1,54,12,061 |
| | Total cost (Development and 12 months O&M) | | **2,16,87,232** |

ಮೇಲ್ಕಂಡ ಪ್ರಸ್ತಾವನೆಯ ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

## **ಸರ್ಕಾರದ ಆದೇಶ ಸಂಖ್ಯೆ: ಇಪಿ 51 ಇಜಿಓವಿ 2025, ಬೆಂಗಳೂರು, ದಿನಾಂಕ: 16.03.2026**

2025-26ನೇ ಸಾಲಿನಲ್ಲಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಗೆ ಸಂಬಂಧಿಸಿದ ರಾಜ್ಯ ಸರ್ಕಾರದ ಆಯವ್ಯಯ ಘೋಷಣೆ – ಕಂಡಿಕೆ 112ರಂತೆ ರಾಜ್ಯದ ಸರ್ಕಾರಿ ಹಾಗೂ ಅನುದಾನಿತ ಶಾಲಾ-ಕಾಲೇಜು ವಿದ್ಯಾರ್ಥಿಗಳ ಹಾಜರಾತಿಯನ್ನು AI-Based Student Facial Attendance Monitoring System ಮೊಬೈಲ್ ಅಪ್ಲಿಕೇಷನ್ ಮೂಲಕ ದಾಖಲಿಸುವ "ನಿರಂತರ" ಕಾರ್ಯಕ್ರಮವನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ (ಇ-ಆಡಳಿತ) ಇಲಾಖೆಯ ಇ-ಆಡಳಿತ ಕೇಂದ್ರದ (Centre for e-Governance) ಮೂಲಕ ಅನುಷ್ಠಾನಗೊಳಿಸಲು ಈ ಕೆಳಕಂಡ ಕೋಷ್ಟಕದ ವಿವರಗಳನ್ವಯ ಅಂದಾಜಿಸಿರುವ ಮೊತ್ತವಾದ ರೂ. 2,16,87,232 - (ತೆರಿಗೆ ಸೇರಿ) (ಎರಡು ಕೋಟಿ ಹದಿನಾರು ಲಕ್ಷದ ಎಂಬ್ಬತ್ತೇಳು ಸಾವಿರದ ಇನ್ನೂರ ಮೂವತ್ತೆರಡು ರೂಪಾಯಿಗಳು ಮಾತ್ರ) ಅನುದಾನವನ್ನು ಪ್ರಸಕ್ತ ಸಾಲಿನ ಲೆಕ್ಕ ಶೀರ್ಷಿಕೆ 4202-01-201-1-04- ಪ್ರಾಥಮಿಕ ಶಾಲೆಗಳು ಮತ್ತು ಪ್ರೌಢಶಾಲೆಗಳಿಗೆ ಮೂಲಭೂತ ಸೌಕರ್ಯ (177-



prabhavaa.com

ಐಟಿ ವೆಚ್ಚ)ರಡಿಯಲ್ಲಿ ಬಿಡುಗಡೆಗೊಳಿಸಿರುವ ಒಟ್ಟು – 500.00 ಲಕ್ಷಗಳ (ಐದು ಕೋಟಿ ರೂಪಾಯಿಗಳು) ಅನುದಾನದಲ್ಲಿ ಮೇಲ್ಕಂಡಂತೆ ಅಂದಾಜಿಸಿರುವ ಮೊತ್ತವನ್ನು ಇ-ಆಡಳಿತ ಕೇಂದ್ರ (Centre for e-Governance) ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ (ಇ-ಆಡಳಿತ) ಇಲಾಖೆಗೆ ಕೂಡಲೇ ಬಿಡುಗಡೆ ಮಾಡುವಂತೆ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ರವರಿಗೆ ಅನುಮತಿಸಿ ಆದೇಶಿಸಿದೆ.

| Sl no | Particulars | Duration | Cost (in Rs.) (Incl. of GST) |
|---|---|---|---|
| 1 | Capex Phase - HR and GPU Cost | 3 months | 62,75,171 |
| 2 | O&M Phase - HR and GPU Cost | 12 months | 1,54,12,061 |
| | Total cost (Development and 12 months O&M) | | **2,16,87,232** |

**ಇಲಾಖಾ ಮುಖ್ಯಸ್ಥರುಗಳು ಪಾಲಿಸಬೇಕಾದ ಷರತ್ತುಗಳು ಮತ್ತು ನಿಬಂಧನೆಗಳು:-**

1. AI-Based Student Facial Attendance Monitoring System ಮೊಬೈಲ್ ಅಪ್ಲಿಕೇಷನ್ ಅನ್ನು ಇ -ಆಡಳಿತ ಕೇಂದ್ರ (Centre for e-Governance) ಇವರು ಏಪ್ರಿಲ್-2026ರ ಒಳಗೆ ಅಭಿವೃದ್ಧಿಪಡಿಸಿ, ಯಾವುದೇ ವಿಳಂಬವಿಲ್ಲದೇ ಮೇ-2026 ಇಂದಲೇ ರಾಜ್ಯದ ಎಲ್ಲಾ ಸರ್ಕಾರಿ ಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳು ಹಾಗೂ ರಾಜ್ಯದ ಎಲ್ಲಾ ಅನುದಾನಿತ ಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ 2026-27ನೇ ಶೈಕ್ಷಣಿಕ ಸಾಲಿನ ಪ್ರಾರಂಭದಿಂದಲೇ ಅನುಷ್ಠಾನಗೊಳಿಸಲು ಶಿಕ್ಷಣ ಇಲಾಖೆಗೆ ಬೆಂಬಲಿತವಾಗಿ ಕಾರ್ಯನಿರ್ವಹಿಸತಕ್ಕದ್ದು.
2. ವಿದ್ಯಾರ್ಥಿಗಳ ಹಾಜರಾತಿಯನ್ನು ಎಲ್ಲಾ ರೀತಿಯ ಪರಿಸರಗಳಲ್ಲಿ (Low-Light Conditions) ಹಾಗೂ ಯಾವುದೇ ವಿದ್ಯಾರ್ಥಿಯ ಹಾಜರಾತಿಯು ತಪ್ಪದಂತೆ ಸೆರೆಹಿಡಿಯಲು ಅಪ್ಲಿಕೇಷನ್ ಅಭಿವೃದ್ಧಿಪಡಿಸಲು ಇ-ಆಡಳಿತ ಕೇಂದ್ರ ಕ್ರಮವಹಿಸತಕ್ಕದ್ದು.
3. ವಿದ್ಯಾರ್ಥಿಗಳ ನೋಂದಣಿ ಮತ್ತು ಹಾಜರಾತಿಯನ್ನು SATS ತಂತ್ರಾಂಶದೊಂದಿಗೆ ಕಡ್ಡಾಯವಾಗಿ ಸಂಯೋಜಿಸತಕ್ಕದ್ದು, ಇದಕ್ಕೆ ಅವಶ್ಯಕವಿರುವ ದತ್ತಾಂಶವನ್ನು ಸಂಬಂಧಪಟ್ಟ ಇಲಾಖಾ ಮುಖ್ಯಸ್ಥರು ಇ-ಆಡಳಿತ ಕೇಂದ್ರಕ್ಕೆ ಒದಗಿಸತಕ್ಕದು.
4. 'ನಿರಂತರ' ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಅಗತ್ಯ IT ವ್ಯವಸ್ಥೆ / ಸಾಫ್ಟ್‌ವೇರ್ / ಹಾಡ್‌ವೇರ್ ಅನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪಾರದರ್ಶಕತೆ ಕಾಯ್ದೆ – 1999ರ ಷರತ್ತುಗಳು ಹಾಗೂ ಕರ್ನಾಟಕ ಸರ್ಕಾರ (ವ್ಯಾಪಾರ ಹಂಚಿಕೆ) ನಿಯಮಗಳು – 1977 ರ ಮಿತಿಗೆ ಒಳಪಟ್ಟು ಖರೀದಿ ಪ್ರಕ್ರಿಯೆ ಕೈಗೊಳ್ಳತಕ್ಕದ್ದು ಹಾಗೂ ಯೋಜನಾ ಅನುಷ್ಠಾನದಲ್ಲಿ ಯಾವುದೇ ವಿಳಂಬವಾಗದಂತೆ ಕ್ರಮವಹಿಸತಕ್ಕದ್ದು.
5. ಕಾರ್ಯಕ್ರಮದ ಅನುದಾನ ಬಳಕೆಗೆ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು, ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಹಾಗೂ ಇ-ಆಡಳಿತ ಕೇಂದ್ರ (Centre for e-Governance) ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ (ಇ-ಆಡಳಿತ) ಇಲಾಖೆ ಇವರು ನಿಯಮಗಳಂತೆ ಲೆಕ್ಕಪತ್ರಗಳನ್ನು ನಿರ್ವಹಿಸತಕ್ಕದ್ದು.
6. "ನಿರಂತರ" ಕಾರ್ಯಕ್ರಮಕ್ಕೆ ಬಿಡುಗಡೆಗೊಳಿಸಿರುವ ಅನುದಾನವನ್ನು ಯಾವ ಉದ್ದೇಶಕ್ಕಾಗಿ ಒದಗಿಸಲಾಗಿದೆಯೋ ಅದೇ ಉದ್ದೇಶಕ್ಕಾಗಿ ಬಳಸತಕ್ಕದ್ದು, ಇತರೆ ಯಾವುದೇ ಉದ್ದೇಶಕ್ಕೆ ಬಳಸತಕ್ಕದ್ದಲ್ಲ.

prabhavaa.com

7. "ನಿರಂತರ" ಕಾರ್ಯಕ್ರಮಕ್ಕೆ ಭರಿಸಲಾಗುವ ವೆಚ್ಚದ ವಿವರವನ್ನು ಪ್ರತಿ ಮಾಹೆ ಹೊಸ ಡಿಜಿಟಲ್ ಸಪೋರ್ಟ್ ಸಿಸ್ಟಂ (ಅವಲೋಕನ) ತಂತ್ರಾಂಶದಲ್ಲಿ ಇಂದೀಕರಿಸಲು ಸಂಬಂಧಿಸಿದವರು ಅಗತ್ಯ ಕ್ರಮವಹಿಸತಕ್ಕದ್ದು.
8. ಅನುದಾನ ಬಿಡುಗಡೆ ಸಂಬಂಧ ಶಿಕ್ಷಣ ಆಯುಕ್ತಾಲಯದ ಹಂತದಲ್ಲಿ ಹೊರಡಿಸಿರುವ ಜ್ಞಾಪನಾ / ಆದೇಶದ ಪ್ರತಿಯನ್ನು ಇಲಾಖಾ ಮುಖ್ಯಸ್ಥರುಗಳು ತಮ್ಮ ಇಲಾಖಾ ವೆಬ್‌ಸೈಟ್‌ನಲ್ಲಿ ಕಡ್ಡಾಯವಾಗಿ ಪ್ರಕಟಿಸುವುದು.
9. AI-Based Student Facial Attendance Monitoring System ಸಂಬಂಧ ಸರ್ಕಾರದ ಆದೇಶ ಸಂಖ್ಯೆ: ಇಪಿ 51 ಇಜಿಓವಿ 2025, ದಿನಾಂಕ: 16.02.2026ರ ಷರತ್ತುಗಳಿಗುಣವಾಗಿ ಸಹ ಇಲಾಖಾ ಮುಖ್ಯಸ್ಥರು ಕಾರ್ಯಕ್ರಮವನ್ನು ಅನುಷ್ಠಾನಗೊಳಿಸತಕ್ಕದ್ದು.
10. ಸದರಿ ಕಾರ್ಯಕ್ರಮದ ಪ್ರಗತಿಯ ವರದಿಯನ್ನು ಪ್ರತಿ ಮಾಹೆ ಇ-ಆಡಳಿತ ಕೇಂದ್ರ (Centre for e-Governance) ಇವರು ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 493 ವೆಚ್ಚ-8/2025, ದಿನಾಂಕ: 11.03.2026ರಲ್ಲಿ ನೀಡಿರುವ ಸೂಚನೆ ಮತ್ತು ಸರ್ಕಾರದ ಆದೇಶ ಸಂಖ್ಯೆ: ಎಫ್.ಡಿ 04 ಟಿಎಫ್‌ಪಿ 2025, ದಿನಾಂಕ: 01.01.2026ರಲ್ಲಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಿದೆ.

**ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ**
**ಮತ್ತು ಅವರ ಹೆಸರಿನಲ್ಲಿ**

(ಶುಭಮಂಗಳ .ಆರ್.ವಿ)
ವಿಶೇಷಾಧಿಕಾರಿ ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ (ಯೋಜನೆ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ

**ಇವರಿಗೆ:**
1. ಮಹಾಲೇಖಪಾಲಕರು (ಆಡಿಟ್-1&2), ಬೆಂಗಳೂರು, ಕರ್ನಾಟಕ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಇ-ಆಡಳಿತ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು.
4. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ನೃಪತುಂಗ ರಸ್ತೆ, ಬೆಂಗಳೂರು.
5. ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ), ಮಲ್ಲೇಶ್ವರಂ, ಬೆಂಗಳೂರು.
6. ಕಾರ್ಯನಿರ್ವಹಣಾಧಿಕಾರಿಗಳು, CeG, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಇ-ಆಡಳಿತ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
7. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಧಾರವಾಡ / ಕಲಬುರಗಿ.
8. ಯೋಜನಾ ನಿರ್ದೇಶಕರು, AI-ML, Karnataka Advanced Attendance Management System (KAAMS), ಬಹುಮಹಡಿಗಳ ಕಟ್ಟಡ, ಬೆಂಗಳೂರು.
9. ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, ಬೆಂಗಳೂರು.
10. ಸರ್ಕಾರದ ಜಂಟಿ ಕಾರ್ಯದರ್ಶಿ-2, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.

prabhavaa.com